**KARNATAKA NURSING & PARAMEDICAL SCIENCES EDUCATION (REGULATION) AUTHORITY**

ಕರ್ನಾಟಕ ನರ್ಸಿಂಗ್ ಹಾಗೂ ಅರೆ ವೈದ್ಯಕೀಯ ವಿಜ್ಞಾನಗಳ ಶಿಕ್ಷಣ (ನಿಯಂತ್ರಣ) ಪ್ರಾಧಿಕಾರ

**PARA MEDICAL BOARD**

# 40/20A, Lakshmi Complex, First Floor, Opp. Vani Vilas Hospital, Fort, Bengaluru-560002

**Ph No**: 080-26702159 **Email**: pmboffice97@gmail.com / pmbexamination@gmail.com

No: PMB/SSP/20/2023-24 Date: 15/12/2023

## ಅಧೀಕೃತ ಜ್ಞಾಪನಾ ಪತ್ರ

ವಿಷಯ: 2023-24 ನೇ ಸಾಲಿಗೆ ಪರಿಶಿಷ್ಟ ಜಾತಿ ಹಾಗು ವರ್ಗದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನಕ್ಕಾಗಿ ಅರ್ಜಿ ಸಲ್ಲಿಸಲು ಮಾಹಿತಿ ನೀಡುವ ಕುರಿತು

ಉಲ್ಲೇಖ: ಸನಿ/ಸಕಇ/ಬೆಂ(ಉ)/ಸಿಬ್ಬಂದಿ/ಸಿ.ಆರ್-73/2023-24 ದಿನಾಂಕ: 24.11.2023

***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ. 2023-24 ನೇ ಸಾಲಿಗೆ ಪರಿಶಿಷ್ಟ ಜಾತಿ ಹಾಗು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನಕ್ಕಾಗಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದ್ದು ವಾರ್ಷಿಕ ಆದಾಯ ಮಿತಿ 2.5 ಲಕ್ಷದೊಳಗಿರುವ ವಿದ್ಯಾರ್ಥಿಗಳು ಆನ್‌ಲೈನ್‌ನಲ್ಲಿ ಸಲ್ಲಿಸಬಹುದಾಗಿರುತ್ತದೆ. ವಿದ್ಯಾರ್ಥಿವೇತನಕ್ಕಾಗಿ ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳು ತಮ್ಮ ಬ್ಯಾಂಕ್ ಖಾತೆಗೆ ಆಧಾರ್ ಸಂಖ್ಯೆಯನ್ನು ಜೋಡಣೆ ಮಾಡುವುದು ಖಡ್ಡಾಯವಾಗಿರುತ್ತದೆ. ಆಧಾರ್ ಜೋಡಣೆಯಾಗಿಲ್ಲದ ವಿದ್ಯಾರ್ಥಿಗಳು ವಿದ್ಯಾರ್ಥಿವೇತನಕ್ಕಾಗಿ ಅರ್ಜಿ ಸಲ್ಲಿಸಲು ಸಾಧ್ಯವಾಗುವುದಿಲ್ಲ. ಆದ್ದರಿಂದ ಆಧಾರ್ ಜೋಡಣೆ ಮಾಡದಿರುವ ವಿದ್ಯಾರ್ಥಿಗಳಿಗೆ ಖಾತೆ ಹೊಂದಿರುವ ಬ್ಯಾಂಕ್‌ಗಳನ್ನು ಸಂಪರ್ಕಿಸಿ ತುರ್ತಾಗಿ ಆಧಾರ್ ಸಂಖ್ಯೆಯನ್ನು NPCI ಗೆ ಲಿಂಕ್ ಮಾಡಿಸಲು ಜಾಗೃತಿ ಮೂಡಿಸುವಂತೆ, ಪರಿಶಿಷ್ಟ ಜಾತಿ ಹಾಗು ವರ್ಗಗಳ ಕಲ್ಯಾಣ ಇಲಾಖೆಯಿಂದ ನಿರ್ದೇಶನ ನೀಡಿರುವುದರಿಂದ ತುರ್ತಾಗಿ ಅರೆ ವೈದ್ಯಕೀಯ ಮಂಡಳಿಯಲ್ಲಿ ಸಂಯೋಜನೆಗೊಂಡಿರುವ ಎಲ್ಲಾ ಅರೆ ವೈದ್ಯಕೀಯ ಕಾಲೇಜುಗಳು ತಮ್ಮ ಪರಿಶಿಷ್ಟ ಜಾತಿ ಹಾಗೂ ವರ್ಗದ ವಿದ್ಯಾರ್ಥಿಗಳು ಬ್ಯಾಂಕ್ ಖಾತೆಗೆ ಆಧಾರ್ ಸಂಖ್ಯೆಯನ್ನು ಜೋಡಿಸ ಬೇಕಾಗಿ ಈ ಮೂಲಕ ತಮ್ಮ ಗಮನಕ್ಕೆ ಸಲ್ಲಿಸಲಾಗಿದೆ.

ಮುಂದುವರೆದು ಆಧಾರ್ ಜೋಡಣೆಯಾಗದಿರುವ ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗಳಿಗೆ 2022-23 ರ ಹಾಗೂ ಹಿಂದಿನ ಸಾಲುಗಳಲ್ಲಿ ಮಂಜೂರಾಗಿರುವ ವಿದ್ಯಾರ್ಥಿವೇತನ ಮೊತ್ತವು ಈವರೆಗೂ ಕೂಡ ಜಮೆಯಾಗಿರುವುದಿಲ್ಲ. ಆದ್ದರಿಂದ ಎಲ್ಲಾ ಪರಿಶಿಷ್ಟ ಜಾತಿ ಹಾಗೂ ವರ್ಗದ ವಿದ್ಯಾರ್ಥಿಗಳು ತಮ್ಮ ಆಧಾರ್ ಸಂಖ್ಯೆಯನ್ನು NPCI ಗೆ ಲಿಂಕ್ ಮಾಡಲು ಸೂಚಿಸುವಂತೆ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರಿಗೆ ನಿರ್ದೇಶನ ನೀಡಲಾಗುದೆ.

ವಂದನೆಗಳೊಂದಿಗೆ,

ವಿಶೇಷಾಧಿಕಾರಿಗಳು,
ಕರ್ನಾಟಕ ನರ್ಸಿಂಗ್ ಹಾಗೂ ಅರೆ ವೈದ್ಯಕೀಯ ವಿಜ್ಞಾನಗಳ
ಶಿಕ್ಷಣ (ನಿಯಂತ್ರಣ) ಪ್ರಾಧಿಕಾರ
ಬೆಂಗಳೂರು